ಕರ್ನಾಟಕ ಸರ್ಕಾರ
ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ
ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 ದಿನಾಂಕ : 08–10–2020

## ಪತ್ರಿಕಾ ಪ್ರಕಟಣೆ

# ರಾಜಕೀಯ ಪಕ್ಷಗಳ ಸ್ಟಾರ್ ಪ್ರಚಾರಕರ ಕುರಿತು ಪರಿಷ್ಕೃತ ಆದೇಶ

ಬೆಂಗಳೂರು, ಅಕ್ಟೋಬರ್ 08 (ಕರ್ನಾಟಕ ವಾರ್ತೆ):

ಕೋವಿಡ್–19 ಸಾಂಕ್ರಾಮಿಕ ರೋಗದ ಹಿನ್ನಲೆಯಲ್ಲಿ ಭಾರತ ಚುನಾವಣಾ ಆಯೋಗವು ರಾಜಕೀಯ ಪಕ್ಷಗಳ ಸ್ಟಾರ್ ಪ್ರಚಾರಕರ ಸಂಖ್ಯೆಯನ್ನು ಮಿತಿಗೊಳಿಸಿ ಆದೇಶ ಹೊರಡಿಸಿದೆ.

ಈ ಹಿಂದೆ ಭಾರತ ಚುನಾವಣಾ ಆಯೋಗವು ಮಾನ್ಯತೆ ಪಡೆದ ರಾಷ್ಟ್ರೀಯ ಹಾಗೂ ರಾಜ್ಯ ಮಟ್ಟದ ಪಕ್ಷಗಳಿಗೆ 40 ಸ್ಟಾರ್ ಪ್ರಚಾರಕರನ್ನು ಬಳಸಿಕೊಳ್ಳುವ ಅವಕಾಶ ನೀಡಲಾಗಿತ್ತು. ಆದರೆ, ಈ ಸಂಖ್ಯೆಯಲ್ಲಿ ಬದಲಾವಣೆ ಮಾಡಿ 30 ಸ್ಟಾರ್ ಪ್ರಚಾರಕರನ್ನು ಬಳಸಿಕೊಳ್ಳಲು ಅವಕಾಶ ನೀಡಲಾಗಿದೆ. ಅದೇ ರೀತಿಯಲ್ಲಿ ನೊಂದಾಯಿತ ರಾಜಕೀಯ ಪಕ್ಷಗಳಿಗೆ ನೀಡಲಾಗಿದ್ದ 20 ಸ್ಟಾರ್ ಪ್ರಚಾರಕರ ಸಂಖ್ಯೆಯನ್ನು 15ಕ್ಕೆ ಇಳಿಸಿ ಪರಿಷ್ಕೃತ ಆದೇಶವನ್ನು ನೀಡಿದೆ.

ರಾಜ್ಯದಲ್ಲಿ ಪ್ರಸ್ತುತ ಘೋಷಣೆಯಾಗಿರುವ ವಿಧಾನ ಸಭಾ ಉಪ ಚುನಾವಣೆಗಳಿಗೆ ಈ ಪರಿಷ್ಕೃತ ಆದೇಶ ಅನ್ವಯವಾಗಲಿದ್ದು, ರಾಜಕೀಯ ಪಕ್ಷಗಳು ಸ್ಟಾರ್ ಪ್ರಚಾರಕರ ಸಭೆಗಳ ಕುರಿತು ಮುಖ್ಯ ಚುನಾವಣಾಧಿಕಾರಿಗಳಿಂದ ಅನುಮತಿ ಪಡೆಯಲು ಚುನಾವಣೆ ಅಧಿಸೂಚನೆಯ ದಿನಾಂಕದಿಂದ ಇದ್ದ ಒಂದು ವಾರದ ಗಡುವನ್ನು 10 ದಿನಗಳಿಗೆ ವಿಸ್ತರಿಸಲಾಗಿದೆ.

ಸ್ಟಾರ್ ಪ್ರಚಾರಕರ ಸಭೆಗಳಿಗೆ ಕನಿಷ್ಠ 48 ಗಂಟೆಗಳ ಮುಂಚೆ ಅನುಮತಿಗಾಗಿ ರಾಜಕೀಯ ಪಕ್ಷಗಳು ಅರ್ಜಿ ಸಲ್ಲಿಸಬೇಕು ಎಂದು ಪ್ರಕಟಣೆ ತಿಳಿಸಿದೆ.

# Revised norms for Star Campaigners

**Bengaluru, October 8 (Karnataka Information)**

1) The **maximum limit** on the number of star campaigners for recognized National / State political parties **shall be 30 in place of 40** and for unrecognized registered political parties it **shall be 15 in place of 20** during the period of pandemic.

2) Accordingly, **the period of submission** of the list of star campaigners is extended **from 7 days to 10 days from the date of notification.** Political parties, which have already submitted a list of star campaigners, shall resubmit a revised list within the stipulated period.

3) Request for permission for the campaigning by star campaigners shall be submitted to the district election authorities **at least 48 hours** before the start of campaign so that all necessary safety measures are put in place by all concerned stakeholders well in time.

# ಆನ್‌ಲೈನ್‌ನಲ್ಲಿ ಅರ್ಜಿ ಆಹ್ವಾನ

**ಬೆಂಗಳೂರು, ಅಕ್ಟೋಬರ್ 08 (ಕರ್ನಾಟಕ ವಾರ್ತೆ) :**

**ಕರ್ನಾಟಕ ಆರ್ಯ ವೈಶ್ಯ ಸಮುದಾಯ ಅಭಿವೃದ್ಧಿ ನಿಗಮದ ವತಿಯಿಂದ 2020-21 ನೇ ಸಾಲಿಗೆ ಅನುಷ್ಠಾನಗೊಳಿಸುತ್ತಿರುವ ವಿವಿಧ ಯೋಜನೆಗಳಿಂದ ಸಾಲ ಪಡೆಯಲು ಇಚ್ಛಿಸುವ ಬೆಂಗಳೂರು ದಕ್ಷಿಣ ಜಿಲ್ಲಾ ವ್ಯಾಪ್ತಿಗೊಳಪಡುವ ಆರ್ಯ ವೈಶ್ಯ ಸಮುದಾಯದವರು ಆನ್‌ಲೈನ್ ಮೂಲಕ ಅರ್ಜಿ ಸಲ್ಲಿಸಲು ಕೋರಲಾಗಿದೆ. ಅರಿವು ಶೈಕ್ಷಣಿಕ ಸಾಲ ಯೋಜನೆ, ಸ್ವಯಂ ಉದ್ಯೋಗ ನೇರ ಸಾಲ ಯೋಜನೆಗೆ ಅರ್ಜಿಯನ್ನು www.kacdc.karnataka.gov.in ಇಲ್ಲಿ ದಿನಾಂಕ 15-11-2020 ರೊಳಗೆ ಸಲ್ಲಿಸಬಹುದಾಗಿದೆ. ಹೆಚ್ಚಿನ ಮಾಹಿತಿಗೆ 080-23156006 ನ್ನು ಸಂಪರ್ಕಿಸಲು ಅಧಿಕೃತ ಪ್ರಕಟಣೆ ತಿಳಿಸಿದೆ.**

**ಮುಖ್ಯಮಂತ್ರಿಯವರ ಅಧ್ಯಕ್ಷತೆಯಲ್ಲಿ ಪ್ರವಾಸೋದ್ಯಮ ಇಲಾಖೆಯ ಪ್ರಗತಿ ಪರಿಶೀಲನಾ ಸಭೆಯ ಮುಖ್ಯಾಂಶಗಳು**

**ಬೆಂಗಳೂರು, ಅಕ್ಟೋಬರ್ 08 (ಕರ್ನಾಟಕ ವಾರ್ತೆ) :**

ಬಾದಾಮಿ, ಕೆಮ್ಮಣ್ಣುಗುಂಡಿ, ಪಟ್ಟದಕಲ್ಲು, ಶ್ರೀರಂಗಪಟ್ಟಣ, ಜೋಗ ಫಾಲ್ಸ್, ಮುಳ್ಳಯ್ಯನಗಿರಿ, ಗಗನಚುಕ್ಕಿ ಭರಚುಕ್ಕಿ ಹಾಗೂ ನಂದಿಬೆಟ್ಟ ಸೇರಿದಂತೆ ರಾಜ್ಯದ ಪ್ರಮುಖ ಪ್ರವಾಸಿ ಸ್ಥಳಗಳನ್ನು ಅಂತಾರಾಷ್ಟ್ರೀಯ ಮಟ್ಟದ ತಾಣಗಳನ್ನಾಗಿ ಮೇಲ್ದರ್ಜೆಗೇರಿಸಲು ತಕ್ಷಣವೇ ಕ್ರಮ ಕೈಗೊಳ್ಳುವಂತೆ ಮುಖ್ಯಮಂತ್ರಿ ಬಿ.ಎಸ್.ಯಡಿಯೂರಪ್ಪ ಪ್ರವಾಸೋದ್ಯಮ ಇಲಾಖೆ ಅಧಿಕಾರಿಗಳಿಗೆ ಸೂಚನೆ ಕೊಟ್ಟಿದ್ದಾರೆ.

ಗುರುವಾರ ಮುಖ್ಯಮಂತ್ರಿಗಳ ಗೃಹಕಚೇರಿ ಕೃಷ್ಣಾದಲ್ಲಿ ನಡೆದ ಪ್ರವಾಸೋದ್ಯಮ ಇಲಾಖೆಯ ಯೋಜನೆಗಳ ಪರಿಶೀಲನಾ ಸಭೆಯಲ್ಲಿ ದೇಶ-ವಿದೇಶಗಳಿಂದ ಪ್ರವಾಸಿಗರನ್ನು ಆಕರ್ಷಿಸಲು ರಾಜ್ಯದ ಪ್ರವಾಸಿ ಸ್ಥಳಗಳಿಗೆ ಮೂಲಭೂತ ಸೌಕರ್ಯಗಳನ್ನು ಕಲ್ಪಿಸಬೇಕು. ಒಂದು ತಿಂಗಳೊಳಗೆ ಅನುಷ್ಠಾನ ಪಾಲನಾ ವರದಿಯನ್ನು ನೀಡಬೇಕೆಂದು ಸಿಎಂ ಸೂಚಿಸಿದರು.

ವಿಶ್ವ ವಿಖ್ಯಾತ ಜೋಗ್ ಫಾಲ್ಸ್ ಸಮಗ್ರ ಅಭಿವೃದ್ಧಿಗೆ ಈಗಾಗಲೇ 120 ಕೋಟಿ ಅನುಮೋದನೆ ನೀಡಲಾಗಿದೆ. ಇಲ್ಲಿ ಯಾವ ಯಾವ ಯೋಜನೆಗಳನ್ನು ಅನುಷ್ಠಾನ ಮಾಡಬಹುದು ಎಂಬುದರ ಬಗ್ಗೆ ಸಮಗ್ರ ವರದಿಯನ್ನು ನೀಡಬೇಕು. ವಿಳಂಬ ಧೋರಣೆ ಸಹಿಸುವುದಿಲ್ಲ ಎಂದು ಅಧಿಕಾರಿಗಳಿಗೆ ಎಚ್ಚರಿಕೆಯನ್ನು ನೀಡಿದರು.

ಐತಿಹಾಸಿಕ ಬಾದಾಮಿಯಲ್ಲಿ ಕೆಲವು ಪಟ್ಟಭದ್ರ ಹಿತಾಸಕ್ತಿಗಳು ಪ್ರವಾಸೋದ್ಯಮ ಇಲಾಖೆಗೆ ಸೇರಿದ ಜಮೀನನ್ನು ಒತ್ತುವರಿ ಮಾಡಿಕೊಂಡಿರುವ ಬಗ್ಗೆ ಆರೋಪಗಳು ಕೇಳಿಬಂದಿವೆ. ಕೂಡಲೇ ಇದನ್ನು ಜಿಲ್ಲಾಡಳಿತ ತೆರವುಗೊಳಿಸಿ ಜಮೀನು ವಶಪಡಿಸಿಕೊಳ್ಳಬೇಕು. ಯಾರೇ ಪ್ರಭಾವಿಗಳಾಗಿದ್ದರೂ ಹಿಂದೆಮುಂದೆ ನೋಡಬೇಡಿ ಎಂದು ಬಿಎಸ್‌ವೈ ಹೇಳಿದರು.

ಹಸ್ತಾಂತರ:

ಇನ್ನು ನಂದಿಬೆಟ್ಟ ಮತ್ತು ಕೆಮ್ಮಣ್ಣುಗುಂಡಿ ಪ್ರವಾಸಿ ತಾಣಗಳನ್ನು ಕೂಡಲೇ ತೋಟಗಾರಿಕೆ ಇಲಾಖೆಯಿಂದ ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಬೇಕು. ಈ ಪ್ರಕ್ರಿಯೆ ಆದಷ್ಟು ಶೀಘ್ರ ಪೂರ್ಣಗೊಳ್ಳಬೇಕು ಎಂದು ತಿಳಿಸಿದರು.

ಈವರೆಗೂ ಕೆಮ್ಮಣ್ಣುಗುಂಡಿ ಮತ್ತು ನಂದಿಬೆಟ್ಟವನ್ನು ತೋಟಗಾರಿಕೆ ಇಲಾಖೆ ಅಡಿಯಲ್ಲೇ ನಿರ್ವಹಣಾ ಮಾಡಲಾಗುತ್ತಿತ್ತು. ಪ್ರವಾಸೋದ್ಯಮ ಇಲಾಖೆ ಈ ಎರಡು ತಾಣಗಳನ್ನು ಸರ್ವಾಂಗೀಣ ಅಭಿವೃದ್ದಿಪಡಿಸಿ ನಿರ್ವಹಣೆ ಮಾಡುವುದಾಗಿ ಆಸಕ್ತಿ

ತೋರಿತ್ತು. ಹೀಗಾಗಿ ತೋಟಗಾರಿಕೆ ಇಲಾಖೆ ವತಿಯಿಂದ ಪ್ರವಾಸೋದ್ಯಮ ಇಲಾಖೆಗೆ ಹಸ್ತಾಂತರಿಸಲು ಸಿಎಂ ಸೂಚಿಸಿದರು.

ಇನ್ನು ಮುಂದೆ ಸಣ್ಣಪುಟ್ಟ ಕಾಮಗಾರಿಗಳನ್ನು ಕೈಗೊಳ್ಳದೆ ಬೃಹತ್ ಯೋಜನೆಗಳನ್ನು ಅನುಷ್ಠಾನ ಮಾಡಬೇಕು. ಸರ್ಕಾರ ಆರ್ಥಿಕ ನೆರವು ಸೇರಿದಂತೆ ಎಲ್ಲ ರೀತಿಯ ಸಹಕಾರ ನೀಡಲು ಸಿದ್ದವಿದೆ ಎಂದು ತಿಳಿಸಿದರು.

ನಂದಿಬೆಟ್ಟಕ್ಕೆ 13.86 ಕೋಟಿ, ಕೆಮ್ಮಣ್ಣುಗುಂಡಿಗೆ 27.57 ಕೋಟಿ, ಬದಾಮಿಗೆ 25 ಕೋಟಿ, ಶ್ರೀರಂಗಪಟ್ಟಣ 12.6 ಕೋಟಿ, ಮೇಲುಕೋಟೆಗೆ 7.9 ಕೋಟಿ ರೂ.ಗಳಲ್ಲಿ ಕಾಮಗಾರಿಗಳನ್ನು ಆರಂಭಿಸಲು ವಿಸ್ತೃತ ವರದಿಯನ್ನು ತಯಾರಿಸಲಾಗಿದೆ ಎಂದು ಅಕಾರಿಗಳು ಮುಖ್ಯಮಂತ್ರಿಗಳ ಗಮನಕ್ಕೆ ತಂದರು.

ಹುದ್ದೆಗಳ ಭರ್ತಿಗೆ ಕ್ರಮ:

ಪ್ರವಾಸೋದ್ಯಮ ಇಲಾಖೆಯಲ್ಲಿ ಕಳೆದ ಹಲವು ವರ್ಷಗಳಿಂದ ಖಾಲಿ ಇರುವ ಹುದ್ದೆಗಳನ್ನು ಹಂತ ಹಂತವಾಗಿ ಭರ್ತಿ ಮಾಡಿಕೊಳ್ಳಬೇಕೆಂದು ಸಚಿವ ಸಿ.ಟಿ.ರವಿ ಅವರು ಸಿಎಂ ಮುಖ್ಯಮಂತ್ರಿಗೆ ಮನವಿ ಮಾಡಿದರು.

ಜಿಲ್ಲಾ ಹಂತದಲ್ಲಿ ವಿಭಾಗೀಯ ಮಟ್ಟದ ಶೇ.73ರಷ್ಟು ಸಿಬ್ಬಂದಿ ಖಾಲಿಯಿದೆ. ಪರಿಣಾಮ ಇಲಾಖೆಯಲ್ಲಿ ಒಬ್ಬರಿಗೆ ಹೆಚ್ಚುವರಿ ಕೆಲಸಗಳು ನಿರ್ವಹಿಸಲು ಸಾಧ್ಯವಾಗುತ್ತಿಲ್ಲ. ಎಷ್ಟು ಸಾಧ್ಯವೋ ಅಷ್ಟು ಭರ್ತಿ ಮಾಡುವಂತೆ ಕೋರಿದರು.

ಇದಕ್ಕೆ ಸ್ಪಂದಿಸಿದ ಮುಖ್ಯಮಂತ್ರಿಯವರು ಹುದ್ದೆಗಳನ್ನು ಭರ್ತಿ ಮಾಡುವ ಕುರಿತು ಹಣಕಾಸು ಇಲಾಖೆ ಅಧಿಕಾರಿಗಳ ಜೊತೆ ಮತ್ತೊಂದು ಸುತ್ತಿನ ಸಭೆ ನಡೆಸಿ ಕ್ರಮಕೈಗೊಳ್ಳುವ ಭರವಸೆ ನೀಡಿದರು.

ಇದೇ ವೇಳೆ ಸಚಿವ ಸಿ.ಟಿ.ರವಿ ಅವರು ತಾವು ಪ್ರವಾಸೋದ್ಯಮ ಸಚಿವರಾದ ನಂತರ ಇಲಾಖೆಯಲ್ಲಿ ಕೈಗೊಂಡಿರುವ ಯೋಜನೆಗಳು, ಅನುಷ್ಠಾನ ಮಾಡಿರುವ ಕಾರ್ಯಕ್ರಮಗಳು ಹಾಗೂ ಮುಂದೆ ಕೈಗೊಳ್ಳಲಿರುವ ಯೋಜನೆಗಳ ಪಟ್ಟಿಯನ್ನು ಮುಖ್ಯಮಂತ್ರಿಯವರಿಗೆ ವಿವರಿಸಿದರು.

ದೇವಸ್ಥಾನಗಳ ಜೀರ್ಣೋದ್ದಾರ, ವಸತಿ ನಿಲಯ, ಯಾತ್ರಿ ನಿವಾಸ, ರಸ್ತೆಸಂಪರ್ಕ, ಶೌಚಾಲಯ ಸೇರಿದಂತೆ ಸುಮಾರು 5 ಕೋಟಿಯೊಳಗಿನ 991 ಕಾಮಗಾರಿಗಳನ್ನು ಪೂರ್ಣಗೊಳಿಸಿದ್ದೇವೆ.

1 ಕೋಟಿಯೊಳಗಿನ 751 ಕಾಮಗಾರಿಗಳ ಪೈಕಿ ಶೇ.75ರಷ್ಟು ಯೋಜನೆಗಳು ಪೂರ್ಣಗೊಂಡಿವೆ. ಪ್ರಮುಖವಾಗಿ ಹೋಟೆಲ್, ಮ್ಯೂಸಿಯಂ, ಸಂರಕ್ಷಣೆ, ಥೀಮ್ ಪಾರ್ಕ್ ಸೇರಿದಂತೆ ಹಲವು ರೀತಿಯ ಕಾಮಗಾರಿಗಳನ್ನು ಕೈಗೊಂಡಿರುವುದಾಗಿ ಮಾಹಿತಿ ನೀಡಿದರು.

ಕರ್ನಾಟಕವನ್ನು ಕೆಲವೇ ವರ್ಷಗಳಲ್ಲಿ ದೇಶದಲ್ಲೇ ಪ್ರವಾಸೋದ್ಯಮದಲ್ಲಿ ಮೊದಲ ರಾಜ್ಯವನ್ನಾಗಿಸಲು ಇಲಾಖೆ ಗುರಿ ಇಟ್ಟುಕೊಂಡಿದೆ. ಹೀಗಾಗಿ ಪ್ರವಾಸಿ ಸ್ಥಳಗಳಲ್ಲಿ ಖಾಸಗಿಯವರು ಬಂಡವಾಳ ಹೂಡಿಕೆಗೆ ಅನುಕೂಲವಾಗುವಂತೆ ಹೂಡಿಕೆದಾರರ ಸಮಾವೇಶವನ್ನು ಆಯೋಜಿಸಲು ತೀರ್ಮಾನಿಸಲಾಗಿದೆ ಎಂದು ತಿಳಿಸಿದರು.

ಸಭೆಯಲ್ಲಿ ಸಚಿವ ಸಿ.ಟಿ.ರವಿ ,

ಸಭೆಯಲ್ಲಿ ಮುಖ್ಯ ಕಾರ್ಯದರ್ಶಿ ಟಿ.ಎಂ.ವಿಜಯಭಾಸ್ಕರ್, ಪ್ರವಾಸೋದ್ಯಮ ಇಲಾಖೆ ಕಾರ್ಯದರ್ಶಿ ಟಿ.ಕೆ.ಅನಿಲ್ ಕುಮಾರ್, ಕೆ.ಎಸ್.ಟಿ.ಡಿ.ಸಿ ಅಧ್ಯಕ್ಷರಾದ ಶೃತಿ, ವಿವಿಧ ಇಲಾಖೆಯ ಅಧಿಕಾರಿಗಳು ಉಪಸ್ಥಿತರಿದ್ದರು.